ಸರ್ಕಾರವು ಬೀದರ್ ಜಿಲ್ಲೆಯಲ್ಲಿ ಎಷ್ಟು ತಾಸು ವಿದ್ಯುತ್ ಸಂಪರ್ಕ ನೀಡುವುದು

164 (105) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ): ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಿಗೆ ದಿನದ 24 ಗಂಟೆ ವಿದ್ಯುತ್ ವಿತರಣೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

ಆ) ಹಾಗಿದ್ದಲ್ಲಿ, ಈ ಯೋಜನೆಯಲ್ಲಿ ಬೀದರ್ ದಕ್ಷಿಣ ತಾಲ್ಲೂಕನ್ನು ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಬೀದರ್ ತಾಲ್ಲೂಕನ್ನು ಯಾವಾಗ ಸೇರಿಸಲಾಗುವುದು?

ಕು॥ ಶೋಭಾ ಕರಂದ್ಲಾಜೆ (ಇಂಧನ ಸಚಿವರು):

ಅ) ಬೀದರ್ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ನಿರಂತರ ಜ್ಯೋತಿ ಯೋಜನೆಯಡಿ ದಿನದ 24 ಗಂಟೆ ವಿದ್ಯುತ್ ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಕೆಳಕಂಡಂತಿವೆ:–

ತಾಲ್ಲೂಕಿನ ಹೆಸರು	ಒಟ್ಟು ಹಳ್ಳಿಗಳು	ಅಂದಾಜು ವೆಚ್ಚ ರೂ. ಲಕ್ಷಗಳಲ್ಲಿ
ಔರಾದ್	131	934.61
ಭಾಲ್ಕಿ	109	1094.96
ಬಸವಕಲ್ಯಾಣ	85	1371.74
ಹುಮ್ನಾಬಾದ	109	717.65
ಒಟ್ಟು	**434**	**4118.96**

ಆ) ಮತ್ತು ಇ) ಬೀದರ್ ದಕ್ಷಿಣ ಮತಕ್ಷೇತ್ರವನ್ನು ನಿರಂತರ ಜ್ಯೋತಿ ಯೋಜನೆಯ 2ನೇ ಹಂತದಲ್ಲಿ ಸೇರಿಸಲಾಗುವುದು.

ಗುಲ್ಬರ್ಗಾದಲ್ಲಿ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆ

165 (258) ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ ಕಲ್ಲಿದ್ದಲು ಆಧಾರಿತ ಶಾಖೋತ್ಪನ್ನ ವಿದ್ಯುತ್ ಯೋಜನೆಗೆ ಸರ್ಕಾರ ಯಾವಾಗ ಮಂಜೂರಾತಿಯನ್ನು ನೀಡಿದೆ; ಈ ಯೋಜನೆಯ ಅಂದಾಜು ವೆಚ್ಚವೆಷ್ಟು;